3. (ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು

ಶ್ರೀ ಬಸವರಾಜ ಹೊರಟ್ಟಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :– ಮಾನ್ಯ ಉಪಾಧ್ಯಕ್ಷರೇ, ದಿನಾಂಕ 28–03–2007 ರಂದು 20 ನೇ ಪಟ್ಟಿಯ ಲಿಖಿತ ಮೂಲಕ ಉತ್ತರಿಸುವ 100 ಪ್ರಶ್ನೆಗಳ ಪೈಕಿ 80 ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಉಪಾಧ್ಯಕ್ಷರು :– ಮಂಡಿಸಲಾಯಿತು. ಈಗ ಸದನವನ್ನು ನಾಳೆ ಬೆಳಿಗ್ಗೆ ಹತ್ತೂವರೆ ಗಂಟೆಗೆ ಸೇರುವಂತೆ ಮುಂದೂಡಲಾಗಿದೆ)

(ಸಭೆಯು 7 ಗಂಟೆ 28 ನಿಮಿಷಕ್ಕೆ ಮುಕ್ತಾಯಗೊಂಡಿತು. ನಾಳೆ ಗುರುವಾರ, 29 ನೇ ತಾರೀಖು ಬೆಳಿಗ್ಗೆ 10 : 30 ಗಂಟೆಗೆ ಸೇರಲು ನಿಶ್ಚಯಿಸಿತು.)

ಅನುಬಂಧ –1

1559 (1835) ಶ್ರೀ ಅಕ್ಕಿಮಲ್ಲಿಕಾರ್ಜುನ ಸಹದೇವಪ್ಪ (ಕುಂದಗೋಳ) :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಸುಮಾರು ಮತಕ್ಷೇತ್ರಗಳಿಗೆ ಮಂಜೂರಾದ ಪದವಿ ಪೂರ್ವ ಕಾಲೇಜುಗಳನ್ನು ಪ್ರಾರಂಭ ಮಾಡದಿರುವುದು ನಿಜವೇ;

ಆ) ಹಾಗಿದ್ದಲ್ಲಿ, ಅದಕ್ಕೆ ಕಾರಣಗಳೇನು;

ಇ) ಧಾರವಾಡ ಜಿಲ್ಲೆಯ ಕುಂದಗೋಳ ತಾಲ್ಲೂಕಿಗೆ ಪದವಿ ಪೂರ್ವ ಕಾಲೇಜುಗಳನ್ನು ಮಂಜೂರು ಮಾಡದಿರಲು ಕಾರಣಗಳೇನು;

ಈ) ಈಗಾಗಲೇ ಮಂಜೂರಾದ ಪದವಿಪೂರ್ವ ಕಾಲೇಜುಗಳಿಗೆ ಯಾವ ಮಾನದಂಡವನ್ನು ಅನುಸರಿಸಲಾಗಿದೆ?

ಶ್ರೀ ಬಿ.ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಹೌದು